**ಕರ್ನಾಟಕ ಸರ್ಕಾರ**

**ತಾಂತ್ರಿಕ ಶಿಕ್ಷಣ ಇಲಾಖೆ**

DTE-ADMI0ACM2/38/2025

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:09.06.2025.

## -:: ಪ್ರವೇಶಾಧಿಸೂಚನೆ ::-

**ವಿಷಯ:** 2025-26ನೇ ಸಾಲಿನಲ್ಲಿ ಪೋಸ್ಟ್ ಡಿಪ್ಲೋಮಾ ಇನ್ ಇಂಡಸ್ಟ್ರಿಯಲ್ ಸೇಫ್ಟಿ ಕೋರ್ಸಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಿ, ಸೀಟು ಹಂಚಿಕೆ ಮಾಡುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಪತ್ರ ಸಂ. ಇಡಿ 126 ಟಿಪಿಇ 2020, ದಿ:25-11-2020 (ಪೋಸ್ಟ್ ಡಿಪ್ಲೋಮಾ ಇಂಡಸ್ಟ್ರಿಲ್ ಸೇಫ್ಟಿ ಅರ್ಹತೆ ಕುರಿತು).

********

2025-26ನೇ ಶೈಕ್ಷಣಿಕ ಸಾಲಿಗೆ ಕೆಳಕಂಡ ಸರ್ಕಾರಿ ಪಾಲಿಟೆಕ್ನಿಕ್‌ನಲ್ಲಿ ಪೋಸ್ಟ್ ಡಿಪ್ಲೋಮಾ ಕೋರ್ಸಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

| ಕ್ರ.ಸ. | ಸಂಸ್ಥೆಯ ಹೆಸರು | ಕೋರ್ಸ್ ಅವಧಿ | ಅರ್ಹತೆ |
|---|---|---|---|
| 1) | ಸರ್ಕಾರಿ ಪಾಲಿಟೆಕ್ನಿಕ್, ಬಳ್ಳಾರಿ | ಪೋಸ್ಟ್ ಡಿಪ್ಲೋಮಾ ಇನ್ ಇಂಡಸ್ಟ್ರಿಯಲ್ ಸೇಫ್ಟಿ 18 ತಿಂಗಳು | Passed Diploma examination with at least 50% marks (45% marks in case of candidates belonging to reserved category) in the qualifying examination.<br>1.Diploma in any Engineering Branch<br>2.For Sponsored Candidates<br>a) Diploma/Graduate Engineering<br>b) B.Sc in Physics and Chemistry and 2 Years of Experience in industry. |

*2025-26ನೇ ಸಾಲಿನ ಎ.ಐ.ಸಿ.ಟಿ.ಇ ಹಾಗೂ ಸರ್ಕಾರದ ಪ್ರವೇಶಾನುಮೋದನಾ ವಿಸ್ತರಣೆಯನ್ನು ಸಲ್ಲಿಸುವ ಷರತ್ತಿಗೊಳ್ಳಪಟ್ಟಿದೆ.

### 1. ಅರ್ಜಿ ಪಡೆಯುವ ದಿನಾಂಕ ಮತ್ತು ಶುಲ್ಕ:

ನಿಗದಿತ ಅರ್ಜಿಯನ್ನು ಮೇಲ್ಕಂಡ ಪಾಲಿಟೆಕ್ನಿಕ್‌ನ ಪ್ರಿನ್ಸಿಪಾಲರವರ ಕಛೇರಿಯಿಂದ **ದಿ:12-06-2025 ರಿಂದ ದಿ:25-06-2025** ರವರೆಗೆ ಪಡೆಯಬಹುದಾಗಿದೆ. **ಅರ್ಜಿ ಶುಲ್ಕ ಪ.ಜಾ/ಪ.ಪಂ ಮತ್ತು ಪ್ರವರ್ಗ-1ರ ಅಭ್ಯರ್ಥಿಗಳಿಗೆ ರೂ. 50/- ಮತ್ತು ಇತರೆ ಹಿಂದುಳಿದ ವರ್ಗದವರು ಹಾಗೂ ಸಾಮಾನ್ಯ ವರ್ಗದವರಿಗೆ ರೂ. 100/-** ಎಂದು ನಿಗದಿಪಡಿಸಲಾಗಿದೆ.

**2. ಕಲ್ಯಾಣ-ಕರ್ನಾಟಕ ಮೀಸಲಾತಿ:-**

ಕರ್ನಾಟಕ ರಾಜ್ಯ ಪತ್ರ ಸಂ. ಡಿಪಿಎಆರ್ 06 ಪಿಎಲ್ಎಕ್ಸ್ 2012 ಬೆಂಗಳೂರು, ದಿನಾಂಕ:06-11-2013ರ ಪ್ರಕಾರ 2025-26ನೇ ಸಾಲಿಗೆ ಡಿಪ್ಲೋಮಾ ಪ್ರವೇಶ ಬಯಸುವ ಅಭ್ಯರ್ಥಿಗಳಿಗೆ ಕಲ್ಯಾಣ-ಕರ್ನಾಟಕ 371(ಜೆ) ಅಡಿಯ ವಿಶೇಷ ಮೀಸಲಾತಿಯ ಬಗ್ಗೆ ಅಭ್ಯರ್ಥಿಗಳ ಅರ್ಹತೆ ಮತ್ತು ಸಲ್ಲಿಸಬೇಕಾದ ದಾಖಲಾತಿಗಳ ಬಗ್ಗೆ ವಿವರವಾದ ಮಾಹಿತಿಯನ್ನು Annexure ರ ಪ್ರಕಾರ ಸಂಬಂಧಪಟ್ಟ ದಾಖಲೆಗಳನ್ನು ಸಲ್ಲಿಸತಕ್ಕದ್ದು. (Annexure ನ್ನು ತಾಂತ್ರಿಕ ಶಿಕ್ಷಣ ಇಲಾಖೆಯ ವೆಬ್‌ಸೈಟ್ dtek.karnataka.gov.in ನಲ್ಲಿ ಪ್ರಕಟಿಸಲಾಗಿದೆ)

**3. ಪ್ರವೇಶ ಸಂಖ್ಯೆಯ ಮಿತಿಯೊಳಗೆ (ಇನ್‌ಟೇಕ್) ಹಾಗೂ ಮಾನ್ಯತೆ ಪಡೆದ ಕೋರ್ಸಿಗೆ ಪ್ರವೇಶ ನೀಡುವ ಬಗ್ಗೆ:-**

2025-26ನೇ ಸಾಲಿನ ಪ್ರವೇಶವು ಮೇಲ್ಕಂಡ ಕೋರ್ಸುಗಳಿಗೆ ಎ.ಐ.ಸಿ.ಟಿ.ಇ ಮತ್ತು ಸರ್ಕಾರದ ಮಾನ್ಯತೆ ಪಡೆಯುವ ಷರತ್ತಿಗೊಳಪಟ್ಟು ನಿಗಧಿಪಡಿಸಲಾಗಿರುವ ಕೋರ್ಸು ಮತ್ತು ಪ್ರವೇಶ ಸಂಖ್ಯೆಯ ಮಿತಿಯೊಳಗೆ ಇರತಕ್ಕದ್ದು. ಆದಾಗ್ಯೂ ಎಐಸಿಟಿಇ ಯಿಂದ ಪಾಲಿಟೆಕ್ನಿಕ್‌ನ ಇನ್‌ಟೇಕ್ ನಿಗದಿಯಲ್ಲಿ ಬದಲಾವಣೆ ಅಥವ ಮಾರ್ಪಾಡು ಆದ ಪಕ್ಷದಲ್ಲಿ ಪ್ರವೇಶ ಸಂಖ್ಯೆಯನ್ನು ಸರಿದೂಗಿಸುವ ಷರತ್ತಿಗೆ ಒಳಪಟ್ಟಿರುತ್ತದೆ. ಸರ್ಕಾರದ ಆದೇಶ ಮತ್ತು ಎ.ಐ.ಸಿ.ಟಿ.ಇ.ಯ ಪೂರ್ವಾನುಮತಿ ಇಲ್ಲದ ಹೊಸ ಕೋರ್ಸುಗಳಿಗೆ ಪ್ರವೇಶ ಮತ್ತು ಪ್ರವೇಶ ಮರುಹೊಂದಾಣಿಕೆಗೂ ಅವಕಾಶವಿರುವುದಿಲ್ಲ. ಅಲ್ಲದೆ ನಿಯಮಗಳನ್ನು ಮೀರಿ ಪ್ರವೇಶ ಮಾಡಿಕೊಳ್ಳಲಾದ ಅಭ್ಯರ್ಥಿಗಳ ಪ್ರವೇಶಾನುಮೋದನೆಯನ್ನು ತಡೆಹಿಡಿಯಲಾಗುವುದಲ್ಲದೆ ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡಲಾಗುವುದಿಲ್ಲ. ಇದಕ್ಕೆ ಆಯಾ ಸಂಸ್ಥೆಯ ಪ್ರಿನ್ಸಿಪಾಲರು ಮತ್ತು ಆಡಳಿತ ಮಂಡಳಿಯವರೇ ಸಂಪೂರ್ಣ ಜವಾಬ್ದಾರರಾಗುತ್ತಾರೆ.

**4. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:**

ಪೂರ್ಣ ಪ್ರಮಾಣದಲ್ಲಿ ಭರ್ತಿ ಮಾಡಲಾದ ಅರ್ಜಿಯನ್ನು ಸಂಬಂಧಪಟ್ಟ ಪ್ರಿನ್ಸಿಪಾಲರಿಗೆ **ದಿ:25.06.2025 ಸಾಯಂಕಾಲ 5.30** ಗಂಟೆಯೊಳಗೆ ತಲುಪಿಸತಕ್ಕದ್ದು. ಅಪೂರ್ಣವಾದ ಅಥವಾ ನಿಗಧಿಪಡಿಸ ಲಾಗಿರುವ ದಿನಾಂಕದ ನಂತರ ತಲುಪುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಅರ್ಜಿಗಳನ್ನು ಅಂಚೆಯ ಮೂಲಕ ಕಳುಹಿಸಲಿಚ್ಛಿಸುವ ಅಭ್ಯರ್ಥಿಗಳು **ದಿ:25.06.2025 ಸಾಯಂಕಾಲ 5.30 ಗಂಟೆಯೊಳಗೆ** ಸಂಬಂಧಿಸಿದ ಪಾಲಿಟೆಕ್ನಿಕ್‌ಗೆ ತಲುಪುವಂತೆ ಕಳುಹಿಸತಕ್ಕದ್ದು.

ಮೇಲೆ ನಮೂದಿಸಿರುವಂತೆ ಕೂಡಲೇ ಕ್ರಮ ತೆಗೆದುಕೊಂಡು ಈ ಬಗ್ಗೆ ಸ್ಥಳೀಯವಾಗಿ ಪತ್ರಿಕಾ ಪ್ರಕಟಣೆಯನ್ನು ನೀಡಿ, ನಿಯಮಗಳ ಪ್ರಕಾರ **ದಿ:30-06-2025 ರ ಒಳಗೆ** ಪ್ರವೇಶ ಪ್ರಕ್ರಿಯೆಯನ್ನು ಪ್ರಿನ್ಸಿಪಾಲರುಗಳು ತಮ್ಮ ಹಂತದಲ್ಲಿಯೇ ಅರ್ಹ ಅಭ್ಯರ್ಥಿಗಳ ಪ್ರವೇಶ ಪ್ರಕ್ರಿಯೆ ಪೂರ್ಣಗೊಳಿಸತಕ್ಕದ್ದು.

ಚಾಲ್ತಿಯಲ್ಲಿರುವ ವಿವಿಧ ನಿಯಮಗಳು ಮತ್ತು ಸರ್ಕಾರಿ ಆದೇಶಗಳಲ್ಲಿ ಸೂಚಿಸಿರುವ ಅಂಶಗಳನ್ನು ಸ್ಪಷ್ಟವಾಗಿ ಗಮನದಲ್ಲಿರಿಸಿಕೊಂಡು ವಿದ್ಯಾರ್ಥಿಗಳ ಪ್ರವೇಶ ಮಾಡಿಕೊಳ್ಳಬೇಕೆಂದು ಹಾಗೂ ನಿಯಮಗಳ ಪ್ರಕಾರ ಪ್ರವೇಶವನ್ನು ಪೂರೈಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ಸಂಸ್ಥೆಗಳ ಪ್ರಾಂಶುಪಾಲರುಗಳಿಗೆ ತಿಳಿಸಲಾಗಿದೆ.

***ಪ್ರವೇಶಕ್ಕೆ ಸಂಬಂಧಿಸಿದಂತೆ ಹೆಚ್ಚಿನ ಮಾಹಿತಿಯನ್ನು ಸಂಬಂಧಪಟ್ಟ ಪಾಲಿಟೆಕ್ನಿಕ್‌ಗಳಿಂದ ಕಛೇರಿ ವೇಳೆಯಲ್ಲಿ ಪಡೆಯಬಹುದಾಗಿದೆ ಹಾಗೂ ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀಕೃತ dtek.karnatak.gov.in ವೆಬ್‌ಸೈಟ್‌ನ್ನು ಸಂಪರ್ಕಿಸಬಹುದಾಗಿರುತ್ತದೆ.***

Digitally signed by
N Manjushree
Date: 12-06-2025
17:20:31

**ಆಯುಕ್ತರು**

**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

**ಬೆಂಗಳೂರು**

**ಗೆ,**

ಪ್ರಿನ್ಸಿಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಬಳ್ಳಾರಿ -- ಸದರಿ ಪ್ರವೇಶಾಧಿಸೂಚನೆಯನ್ನು ಸಂಸ್ಥೆಯ ಸೂಚನಾ ಫಲಕದಲ್ಲಿ ಅಭ್ಯರ್ಥಿಗಳಿಗೆ ಹಾಗೂ ಸಾರ್ವಜನಿಕರ ಮಾಹಿತಿಗಾಗಿ ಪ್ರಕಟಿಸುವುದು. ಹಾಗೂ ಸ್ಥಳೀಯ ದಿನಪತ್ರಿಕೆಗಳಲ್ಲಿ ಪ್ರಕಟಣೆ ನಿಡುವುದು.

**ಪ್ರತಿ ಮಾಹಿತಿಗಾಗಿ:-**

1. ಆಯುಕ್ತರವರ ಆಪ್ತಶಾಖೆಗೆ.
2. ನಿರ್ದೇಶಕರವರ ಆಪ್ತಶಾಖೆಗೆ
3. ಜಂಟಿ ನಿರ್ದೇಶಕರು(ಆಡಳಿತ), ತಾಂತ್ರಿಕ ಶಿಕ್ಷಣ ಆಯುಕ್ತಾಲಯ, ಬೆಂಗಳೂರು.
4. ಕಾರ್ಯದರ್ಶಿಗಳು, ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು
5. ಸಾರ್ವಜನಿಕ ಸಂಪರ್ಕಾಧಿಕಾರಿ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
6. ಇ-ಆಡಳಿತ ವಿಭಾಗಕ್ಕೆ - ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
7. ಡಿವಿಪಿ(2) ವಿಭಾಗಕ್ಕೆ.
8. ಕಛೇರಿ ಪ್ರತಿ.